ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 9/3/21

### ಗಗನಕ್ಕೇರಿದ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ: ಸಂಸತ್‌ನಲ್ಲಿ ಚರ್ಚೆಗೆ ಅವಕಾಶ ಕೋರಿದ ಕಾಂಗ್ರೆಸ್

# ಹೋರಾಟ ಮುಂದುವರಿಯಲಿದೆ: ಖರ್ಗೆ

ಪ್ರಜಾವಾಣಿ ವಾರ್ತೆ 9-3-21

ನವದೆಹಲಿ: ಹಣದುಬ್ಬರ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ಏರಿಕೆಗೆ ಸಂಬಂಧಿಸಿದಂತೆ ಸಂಸತ್‌ನಲ್ಲಿ ವಿಸ್ತೃತ ಚರ್ಚೆಗೆ ಅವಕಾಶ ನೀಡುವಂತೆ ಕೋರಿರುವ ಕಾಂಗ್ರೆಸ್, ಜನಸಾಮಾನ್ಯರ ಪರ ಪ್ರತಿಭಟನೆ ಮುಂದುವರಿಸುವುದಾಗಿ ಹೇಳಿದೆ.

ರಾಜ್ಯಸಭೆಯಲ್ಲಿ ಆರಂಭವಾದ ಬಜೆಟ್ ಅಧಿವೇಶನದ ದ್ವಿತೀಯಾರ್ಧದ ಮೊದಲ ದಿನವಾದ ಸೋಮವಾರ ಈ ಕುರಿತು ಚರ್ಚೆಗೆ ಅವಕಾಶ ಸಿಗದೇ ಹೋಗಿದ್ದರಿಂದ ಕಾಂಗ್ರೆಸ್ ಸದಸ್ಯರು ಪ್ರತಿಭಟನೆ ನಡೆಸಿದರು.

ಪೆಟ್ರೋಲ್, ಡೀಸೆಲ್ ಮತ್ತು ಅಡುಗೆ ಅನಿಲದ ಬೆಲೆ ಏರಿಕೆಯಿಂದ ಜನಸಾಮಾನ್ಯರು ತೀವ್ರ ಸಮಸ್ಯೆ ಎದುರಿಸುವಂತಾಗಿದೆ. ಈ ಕುರಿತು ಚರ್ಚೆಗೆ ನಿಯಮಾನುಸಾರ ಅವಕಾಶ ಕೋರಿದರೂ ಸಭಾಪತಿ ಪರಿಗಣಿಸಲಿಲ್ಲ. ಹಾಗಾಗಿ ಮೊದಲ ದಿನದ ಕಲಾಪ ನಡೆಯಲಿಲ್ಲ ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ



ಮಲ್ಲಿಕಾರ್ಜುನ ಖರ್ಗೆ

ಮಲ್ಲಿಕಾರ್ಜುನ ಖರ್ಗೆ ಸುದ್ದಿಗಾರರಿಗೆ ತಿಳಿಸಿದರು.

'ಜನರ ಆಕ್ರೋಶಕ್ಕೆ ಕಾರಣವಾಗಿರುವ ಬೆಲೆ ಏರಿಕೆಯ ವಿರುದ್ಧ ಸಂಸತ್‌ನ ಉಭಯ ಸದನಗಳಲ್ಲಿ ದನಿ ಎತ್ತಿ, ವಿಸ್ತೃತ ಚರ್ಚೆಯನ್ನು ಬಯಸಿದ್ದೇವೆ. ಆದರೆ, ಸರ್ಕಾರ ಅದಕ್ಕೆ ಒಪ್ಪಿಗೆ ಸೂಚಿಸಿಲ್ಲ. ಬೇಡಿಕೆ ಈಡೇರುವವರೆಗೂ ನಮ್ಮ ಪ್ರತಿಭಟನೆ ಮುಂದುವರಿಯಲಿದೆ' ಎಂದು ಘೋಷಿಸಿದರು.

'ಕಳೆದ ಆರು ವರ್ಷಗಳಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ಏರಿಕೆಯಿಂದಲೇ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಬೊಕ್ಕಸಕ್ಕೆ ಬಂದಿರುವ ಅಂದಾಜು ₹ 21 ಲಕ್ಷ ಕೋಟಿ ಹಣ ಎಲ್ಲಿ ಹೋಯಿತು' ಎಂದು ಪ್ರಶ್ನಿಸಿದರು.

ಕೃಷಿ ಕಾಯ್ದೆ ತಿದ್ದುಪಡಿ ವಿರೋಧಿಸಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದವರಲ್ಲಿ 273 ರೈತರು ಸಾವಿಗೀಡಾಗಿದ್ದಾರೆ. ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿ ಸಂಸತ್‌ನಲ್ಲಿ ಗೌರವ ಸಲ್ಲಿಸಬೇಕು ಎಂಬುದು ಕಾಂಗ್ರೆಸ್‌ನ ಮನವಿಯಾಗಿತ್ತು, ಆದರೆ, ಇಂಥ ಮಹತ್ವದ ವಿಷಯದ ಕುರಿತು ಚರ್ಚೆಗೆ ಸಭಾಪತಿ ಎಂ.ವೆಂಕಯ್ಯ ನಾಯ್ಡು ಅವಕಾಶ ನೀಡಲಿಲ್ಲ ಎಂದು ರಾಜ್ಯಸಭೆ ಸದಸ್ಯ ನಾಸಿರ್ ಹುಸೇನ್ ಹೇಳಿದರು.

**ಕಲಾಪ ಮುಂದಕ್ಕೆ:** ಇಂಧನ ದರ ಏರಿಕೆಯ ಬಗ್ಗೆ ಚರ್ಚೆ ನಡೆಯಬೇಕು ಎಂಬ ವಿರೋಧ ಪಕ್ಷಗಳ ಒತ್ತಾಯಕ್ಕೆ ಸರ್ಕಾರ ಮಣೆ ಹಾಕದ್ದರಿಂದ ವಿರೋಧ ಪಕ್ಷಗಳು ಗದ್ದಲ ಎಬ್ಬಿಸಿದವು. ಇದರಿಂದ ಸೋಮವಾರ ರಾಜ್ಯಸಭೆಯ ಕಲಾಪ ಎರಡು ಬಾರಿ ಮುಂದಕ್ಕೆ ಹೋಗಿ ಕೊನೆಗೆ ಇಡೀ ದಿನದ ಮಟ್ಟಿಗೆ ಕಲಾಪ ಬಲಿಯಾಯಿತು.

ಸೋಮವಾರ ಬಜೆಟ್ ಅಧಿವೇಶನದ ಎರಡನೇ ಅವಧಿಯ ಕಲಾಪ ಆರಂಭವಾಗುತ್ತಿದ್ದಂತೆಯೇ ನಿಗದಿತ ಕಲಾಪ ಸೂಚಿಯ ಬದಲಿಗೆ ಇಂಧನ ದರ ಏರಿಕೆಯನ್ನೇ ಮೊದಲಿಗೆ ಚರ್ಚೆಗೆ ಕೈಗೆತ್ತಿಕೊಳ್ಳಬೇಕು ಎಂದು ವಿರೋಧ ಪಕ್ಷಗಳ ಪಟ್ಟು ಹಿಡಿದವು. ಇದಕ್ಕೆ ಸಭಾಧ್ಯಕ್ಷರು ಒಪ್ಪಿಗೆ ಕೊಡಲಿಲ್ಲ. ಆಗ ಗದ್ದಲ ಉಂಟಾದ್ದರಿಂದ ಕಲಾಪವನ್ನು ಎರಡು ಸಲ ಮುಂದೂಡಲಾಯಿತು. ಮೂರನೇ ಬಾರಿಯೂ ಗದ್ದಲ ಮುಂದುವರಿದದ್ದರಿಂದ ಸಭಾಧ್ಯಕ್ಷರ ಸ್ಥಾನದಲ್ಲಿದ್ದ ವಂದನಾ ಚವಾಣ್ ಅವರು ಕಲಾಪವನ್ನು ಮಂಗಳವಾರಕ್ಕೆ ಮುಂದೂಡಿದರು.

## ಬಜೆಟ್ ಅಧಿವೇಶನ ಅವಧಿ ಮೊಟಕು ಸಾಧ್ಯತೆ

ನವದೆಹಲಿ (ಪಿಟಿಐ): ಸಂಸತ್‌ನ ಬಜೆಟ್ ಅಧಿವೇಶನದ ಅವಧಿ ಕಡಿತಗೊಳ್ಳುವ ಸಾಧ್ಯತೆ ಇದೆ. ವಿವಿಧ ರಾಜ್ಯಗಳ ವಿಧಾನಸಭೆಯ ಮೊದಲ ಹಂತದ ಚುನಾವಣೆ ಮಾರ್ಚ್ 27ರಂದು ನಡೆಯಲಿದ್ದು, ಇದಕ್ಕೂ ಮೊದಲೇ ಬಜೆಟ್ ಅಧಿವೇಶನ ಅಂತ್ಯಗೊಳ್ಳುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ.

ಅಧಿವೇಶನದ ಅವಧಿಯನ್ನು ಮೊಟಕುಗೊಳಿಸುವ ಕುರಿತು ಸ್ಪೀಕರ್ ಓಂ ಬಿರ್ಲಾ ಅಂತಿಮ ನಿರ್ಧಾರ ಕೈಗೊಳ್ಳುವರು.

ಈಗಾಗಲೇ ನಿಗದಿಯಾಗಿರುವಂತೆ ಏಪ್ರಿಲ್ 8ರ ವರೆಗೆ ಬಜೆಟ್ ಅಧಿವೇಶನ ನಡೆಯಬೇಕಿತ್ತು. ಆದರೆ, ನಾಲ್ಕು ರಾಜ್ಯಗಳ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆಗೆ ಚುನಾವಣೆ ನಡೆಯುವ ಕಾರಣ ಅಧಿವೇಶನ ಅವಧಿಯನ್ನು ಮೊಟಕುಗೊಳಿಸುವಂತೆ ಹಲವಾರು ಪಕ್ಷಗಳು ಮನವಿ ಮಾಡಿದ್ದವು.

ಮಂಗಳವಾರ ಉಭಯ ಸದನಗಳ ಕಲಾಪ ಬೆಳಿಗ್ಗೆ 11ಕ್ಕೆ ಆರಂಭವಾಗಿ, ಸಂಜೆ 6ರ ವರೆಗೆ ನಡೆಯುವುದು. ಕೋವಿಡ್‌ನಿಂದಾಗಿ ಈ ವರೆಗೆ ಬದಲಾದ ಸಮಯದಲ್ಲಿ ಸದನದ ಕಲಾಪಗಳು ನಡೆಯುತ್ತಿದ್ದವು.